ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

कर्नाटक-संस्कृत-विश्वविद्यालयः
श्री चामराजेन्द्र संस्कृत महाविद्यालयस्य परिसरः
पम्पमहाकविमार्गः, चामराजपेटे, बेङ्गलूरु – ५६००१८.

ಸಂಖ್ಯೆ: ಕಸಂವಿ/ಪ್ರ.ಸ/2017-18 /76-196 ದಿನಾಂಕ: 08.06.2017

ಮಾನ್ಯರೆ,

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ಮೂವತ್ತೆಂಟನೆಯ** ಸಭೆಯು ದಿನಾಂಕ: **01.06.2017ರ ಗುರುವಾರ ಬೆಳಿಗ್ಗೆ 11.00 ಗಂಟೆಗೆ** ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಮಾನ್ಯ ಕುಲಪತಿಗಳು ವಹಿಸಿದ್ದರು. ಈ ಪತ್ರದೊಂದಿಗೆ ಆ ದಿನ ನಡೆದ ಸಭೆಯ ನಡಾವಳಿಯನ್ನು ತಮ್ಮ ಅವಗಾಹನೆಗೆ ಕಳುಹಿಸಿಕೊಡಲಾಗಿದೆ.

ಈ ಸಭೆಯ ನಡಾವಳಿಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪತ್ರ ತಲುಪಿದ ದಿನಾಂಕದಿಂದ ಹತ್ತು ದಿನಗಳೊಳಗಾಗಿ ಸಲ್ಲಿಸಲು ಕೋರಲಾಗಿದೆ.

ವಂದನೆಗಳೊಂದಿಗೆ,

ಕುಲಸಚಿವರು
**ಕುಲಸಚಿವರು**
**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
**ಬೆಂಗಳೂರು – 560018.**

ಇವರಿಗೆ,

1. **ಶ್ರೀಮತಿ ಸುಜಾತ ಗೌಡ,** # 30, 7ನೇ ಹಂತ, 2ನೇ ಮುಖ್ಯರಸ್ತೆ, ಬಿ.ಇ.ಎಂ.ಎಲ್. ಲೇಔಟ್, ಮೈಲಸಂದ್ರ, ಕೆಂಗೇರಿ, ಬೆಂಗಳೂರು – 560059.
2. **ಶ್ರೀ ಶಿವಕುಮಾರ್ ಎನ್.,** # 109, 2ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಪಾಂಡುರಂಗ ಬಡಾವಣೆ, ಅರಕೆರೆ ಗೇಟ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560076.
3. **ವಿದ್ವಾನ್ ಕೆ. ಭೀಮಪ್ಪ,** ನಂ. 26, ಅಂಬೇಡ್ಕರ್ ಕಲ್ಯಾಣ ಮಂಟಪದ ಹತ್ತಿರ, ರಾಜೇಂದ್ರ ನಗರ, ಚಿತ್ರದುರ್ಗ ಜಿಲ್ಲೆ.
4. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ,** ರಾಮಪುರ, ರಬಕವಿ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
5. **ಪ್ರೊ. ಮೈಕೆಲ್,** ಸಂಸ್ಕೃತ ಪ್ರಾಧ್ಯಾಪಕರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಜ್ಞಾನಗಂಗಾ, ಕಲಬುರಗಿ-585106.
6. **ಶ್ರೀಮತಿ ಜಯಶ್ರೀ ವಿ. ಕೊರತಿ,** ಕೆನರಾ ವೆಲ್‌ಫೇರ್ ಟ್ರಸ್ಟ್ ಎಜುಕೇಷನ್ ಕಾಲೇಜು, ದಾಂಡೇಲಿ, ಉತ್ತರ ಕನ್ನಡ ಜಿಲ್ಲೆ – 581325
7. **ವಿದ್ವಾನ್ ಸಿದ್ಧಮಲ್ಲ ಸ್ವಾಮಿ,** ನಂ. 136/1, ಶ್ರೀ ನೀಲಕಂಠಸ್ವಾಮಿ ಮಠ, ಹರಿಶ್ಚಂದ್ರ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು-570009
8. **ಶ್ರೀ ಗಜಾನನ ಲಕ್ಷ್ಮೀನಾರಾಯಣ ಭಟ್ಟ,** ಉಮ್ಮಚಗಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ – 581347
9. **ಡಾ. ಕೆ. ಸುಧಾಕರ್,** ನಂ. 346/347, 'ಪ್ರೇಮವಿಲ್ಲಾ', 14ನೇ ಮುಖ್ಯರಸ್ತೆ, ಆರ್.ಎಂ.ವಿ. ಬಡಾವಣೆ, ಸದಾಶಿವನಗರ, ಬೆಂಗಳೂರು-80.
10. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್,** ರೂಮ್ ನಂ. 145, 1ನೇ ಮಹಡಿ, ವಿಧಾನಸೌಧ, ಬೆಂಗಳೂರು-560001.
11. **ಅಪರ ಮುಖ್ಯ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು-560001
12. **ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ವಿಧಾನಸೌಧ, ಬೆಂಗಳೂರು-560001
13. **ಸರ್ಕಾರದ ಕಾರ್ಯದರ್ಶಿ,** ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ) ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು-560001
14. **ಪ್ರಾದೇಶಿಕ ನಿರ್ದೇಶಕರು,** ಯುಜಿಸಿ-ನೈಋತ್ಯ ಪ್ರಾದೇಶಿಕ ಕೇಂದ್ರ, ಪ್ರಸನ್ನಕುಮಾರ್ ಬ್ಲಾಕ್, ಅರಮನೆ ರಸ್ತೆ, ಬೆಂಗಳೂರು-09,
15. **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಅರಮನೆ ಆವರಣ, ಮೈಸೂರು-570001.
16. **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು-560002.
17. **ಆಯುಕ್ತರು,** ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-560001
18. **ನಿರ್ದೇಶಕರು,** ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ ಬೆಂಗಳೂರು-560001
19. **ನಿರ್ದೇಶಕರು,** ಪದವಿಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012
20. **ನಿರ್ದೇಶಕರು,** ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು-560009
21. **ಆಯುಕ್ತರು,** ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001

ಪ್ರತಿಗಳು:

1. **ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು,** ರಾಜಭವನ, ಬೆಂಗಳೂರು – 560001
2. **ಮಾನ್ಯ ಕುಲಪತಿಯವರ ಆಪ್ತಶಾಖೆ,** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
3. ಕಛೇರಿ ಪ್ರತಿ 4. ರಕ್ಷತಾ ಪ್ರತಿ 5. ಜಾಲತಾಣಕ್ಕೆ ಅಳವಡಿಸಲು – ತುರ್ತು

## 01.06.2017ರಂದು ನಡೆದ ಪ್ರಶಾಸನ ಸಮಿತಿ (ಸಿಂಡಿಕೇಟ್) 38ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ 38ನೇ ಸಭೆ**ಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ **ಜೂನ್ 01, 2017ರ ಗುರುವಾರ ಬೆಳಿಗ್ಗೆ 11.00** ಗಂಟೆಗೆ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | |
|---|---|
| ೧. **ಪ್ರೊ. ಪದ್ಮಾಶೇಖರ್**, ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. **ಶ್ರೀಮತಿ ಸುಜಾತ ಗೌಡ**, ಬೆಂಗಳೂರು | ಸದಸ್ಯರು |
| ೩. **ಶ್ರೀ ಶಿವಕುಮಾರ್ ಎನ್.**, ಬೆಂಗಳೂರು | ಸದಸ್ಯರು |
| ೪. **ಶ್ರೀ ಕೆ. ಭೀಮಪ್ಪ**, ನಿವೃತ್ತ ಶಿಕ್ಷಣಾಧಿಕಾರಿಗಳು, ಚಿತ್ರದುರ್ಗ | ಸದಸ್ಯರು |
| ೫. **ಶ್ರೀಮತಿ ಜಯಶ್ರೀ ವಿ. ಕೊರತಿ**, ಪ್ರಾಚಾರ್ಯರು, ದಾಂಡೇಲಿ | ಸದಸ್ಯರು |
| ೬. **ವಿದ್ವಾನ್** ಸಿದ್ಧಮಲ್ಲ **ಸ್ವಾಮಿ**, ನಿವೃತ್ತ ಪ್ರಾಧ್ಯಾಪಕರು, ಮೈಸೂರು | ಸದಸ್ಯರು |
| ೭. **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್ಟ**, ನಿವೃತ್ತ ಪ್ರಾಚಾರ್ಯರು, ಉಮ್ಮಚಗಿ | ಸದಸ್ಯರು |
| ೮. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್**, ಮಾನ್ಯ ವಿಧಾನಪರಿಷತ್ ಸದಸ್ಯರು, ಬೆಂಗಳೂರು | ಸದಸ್ಯರು |
| ೯. **ನಿರ್ದೇಶಕರು**, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು – ಪರವಾಗಿ ಶ್ರೀಮತಿ ಮಂಜುಳಾ ಸಿ.ಎನ್., ಸಹಾಯಕ ನಿರ್ದೇಶಕರು | ಸದಸ್ಯರು |
| ೧೦. **ಶ್ರೀಮತಿ ಎಂ. ಶಿಲ್ಪ**, ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | |
|---|---|
| ೧. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ**, ನಿವೃತ್ತ ಅಧ್ಯಾಪಕರು, ರಾಮಪುರ, ರಬಕವಿ | ಸದಸ್ಯರು |
| ೨. **ಡಾ. ಮೈಕೆಲ್**, ಪ್ರಾಧ್ಯಾಪಕರು ಮತ್ತು ಡೀನ್, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | ಸದಸ್ಯರು |
| ೩. **ಡಾ. ಕೆ. ಸುಧಾಕರ್**, ಶಾಸಕರು(ಚಿಕ್ಕಬಳ್ಳಾಪುರ), ಬೆಂಗಳೂರು | ಸದಸ್ಯರು |
| ೪. **ಅಪರ ಮುಖ್ಯ ಕಾರ್ಯದರ್ಶಿಗಳು**, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೫. **ಅಪರ ಮುಖ್ಯ ಕಾರ್ಯದರ್ಶಿಗಳು**, ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೬. **ಕಾರ್ಯದರ್ಶಿಗಳು**, ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೭. **ಪ್ರಾದೇಶಿಕ ನಿರ್ದೇಶಕರು**, ಯುಜಿಸಿ–ನೈರುತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು–09 | ಸದಸ್ಯರು |
| ೮. **ಆಯುಕ್ತರು**, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೯. **ಆಯುಕ್ತರು**, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001 | ಸದಸ್ಯರು |
| ೧೦. **ನಿರ್ದೇಶಕರು**, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಬೆಂಗಳೂರು–560001 | ಸದಸ್ಯರು |
| ೧೧. **ನಿರ್ದೇಶಕರು**, ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಬೆಂಗಳೂರು–560012 | ಸದಸ್ಯರು |
| ೧೨. **ನಿರ್ದೇಶಕರು**, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009 | ಸದಸ್ಯರು |
| ೧೩. **ನಿರ್ದೇಶಕರು**, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001 | ಸದಸ್ಯರು |

ಸಭೆಯ ಆರಂಭಕ್ಕೆ ಮುನ್ನ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಅನಂತರ ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಂಡಿತವಾಗಿ ನಿರ್ಣಯಗೊಂಡವು.

| | | |
|---|---|---|
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ಪ್ರಶಾಸನ ಸಮಿತಿ 37ನೇ ಸಭೆಯ ಅನುಪಾಲನಾ ವರದಿಯನ್ನು ಅನುಮೋದಿಸುವ ಬಗೆಗೆ.**<br>ಪ್ರಶಾಸನ ಸಮಿತಿ 37ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 01.04.2017ರಂದು ನಡೆಯಿತು. ಸಭೆಯ ನಿರ್ಣಯದಂತೆ ಕೈಗೊಳ್ಳಲಾದ ಅನುಪಾಲನಾ ವರದಿಯನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಪ್ರಶಾಸನ ಸಮಿತಿ 37ನೇ ಸಭೆಯ ಅನುಪಾಲನಾ ವರದಿಯನ್ನು ಪರಿಶೀಲಿಸಿ, ಅನುಮೋದನೆಯನ್ನು ನೀಡಿತು.** |

| | | |
|---|---|---|
| ವಿಷಯ 02 | ವಿಷಯ ಮತ್ತು ಟಿಪ್ಪಣಿ | 'ಹಣಕಾಸು ಸಮಿತಿ' 25ನೇ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಹಣಕಾಸು ಸಮಿತಿ' 25ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 26.05.2017ರಂದು ನಡೆಯಿತು. ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | ಸಭೆಯು 'ಹಣಕಾಸು ಸಮಿತಿ' 25ನೇ ಸಭೆಯ ನಡಾವಳಿಗಳನ್ನು ಪರಿಶೀಲಿಸಿ, ಅನುಮೋದನೆಯನ್ನು ನೀಡಿತು. |
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **ನಿಕಾಯಗಳ ಡೀನರನ್ನು ಮುಂದುವರೆಸುವುದರ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮ 2009ರ ಅಧ್ಯಾಯ–III ಪರಿಚ್ಛೇದ 14ರ ಅನ್ವಯ ಆಯಾ ನಿಕಾಯಗಳಲ್ಲಿರುವ ಪ್ರಾಧ್ಯಾಪಕರೊಬ್ಬರನ್ನು ಮೂರು ವರ್ಷಗಳ ಅವಧಿಗೆ ಡೀನರನ್ನಾಗಿ ನೇಮಕ ಮಾಡಬೇಕಾಗಿರುತ್ತದೆ. ಅದರಂತೆ, ಪ್ರೊ. ಶ್ರೀನಿವಾಸ ವರಖೇಡಿ, ಪ್ರಾಧ್ಯಾಪಕರು, ಶಾಸ್ತ್ರನಿಕಾಯ; ಪ್ರೊ. ವಿ. ಗಿರೀಶ್‌ಚಂದ್ರ, ಪ್ರಾಧ್ಯಾಪಕರು, ಭಾಷಾನಿಕಾಯ ಹಾಗೂ ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ, ಸಹ ಪ್ರಾಧ್ಯಾಪಕರು, ವೇದಾಂತನಿಕಾಯ –ಇವರುಗಳು ಆಯಾ ನಿಕಾಯಗಳ ಡೀನರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಈಗಾಗಲೇ ಮೂರು ವರ್ಷಗಳ ಅವಧಿಯನ್ನು ಪೂರೈಸಿರುತ್ತಾರೆ. ನಿಯಮಗಳನುಸಾರ ಡೀನರನ್ನು ಬದಲಾವಣೆ ಮಾಡಬೇಕಿರುವುದು ಸರಿಯಷ್ಟೆ. ಆದರೆ, ಈ ಮೂರೂ ನಿಕಾಯಗಳಲ್ಲಿ ನೇಮಕಗೊಂಡಿರುವ ಪ್ರಾಧ್ಯಾಪಕರ ಸಂಖ್ಯೆ ಸೀಮಿತವಾಗಿರುವ ಹಿನ್ನೆಲೆಯಲ್ಲಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಧ್ಯಾಪಕರನ್ನೇ ಆಯಾ ನಿಕಾಯಗಳ ಡೀನರಾಗಿ ಮುಂದುವರೆಸಲಾಗಿದೆ. ಈ ವಿಷಯವನ್ನು ಪ್ರಶಾಸನ ಸಮಿತಿಯ ಅವಗಾಹನೆಗೆ ಮಂಡಿಸಿದೆ. |
| | ನಿರ್ಣಯ | **ನಿಕಾಯಗಳ ಡೀನರ ಅವಧಿಯನ್ನು ಮುಂದುವರೆಸಿರುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 04 | ವಿಷಯ ಮತ್ತು ಟಿಪ್ಪಣಿ | **ಅಧ್ಯಯನಾಂಗಕ್ಕೆ ಸಹನಿರ್ದೇಶಕರು ಹಾಗೂ ಸಹಾಯಕ ನಿರ್ದೇಶಕರನ್ನು ನಿಯೋಜಿಸಿರುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಅಧ್ಯಯನಾಂಗ'ದ ನಿರ್ದೇಶಕರಾಗಿ ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ ಅವರು ಕಾರ್ಯನಿರ್ವಹಿಸುತ್ತಿದ್ದಾರೆ. ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಕಾರ್ಯಚಟುವಟಿಕೆಗಳ ಸಮರ್ಪಕ ನಿರ್ವಹಣೆಗಾಗಿ ಅಧ್ಯಯನಾಂಗಕ್ಕೆ ಸಹನಿರ್ದೇಶಕರು ಹಾಗೂ ಸಹಾಯಕ ನಿರ್ದೇಶಕರನ್ನು ನಿಯೋಜಿಸಲು ತೀರ್ಮಾನಿಸಿ, ಡಾ. ಶಿವಾನಿ ವಿ., ಸಹಪ್ರಾಧ್ಯಾಪಕರು, ಶಾಸ್ತ್ರನಿಕಾಯ –ಇವರನ್ನು ಸಹನಿರ್ದೇಶಕರನ್ನಾಗಿ ಹಾಗೂ ವಿದ್ವಾನ್ ಋಷಿದೇವ್ ಭಾರ್ಗವ ಎನ್., ಸಹಾಯಕ ಪ್ರಾಧ್ಯಾಪಕರು, ಶಾಸ್ತ್ರನಿಕಾಯ –ಇವರನ್ನು ಸಹಾಯಕ ನಿರ್ದೇಶಕರನ್ನಾಗಿ ನಿಯೋಜಿಸಲಾಗಿದೆ. ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಈ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಅಧ್ಯಯನಾಂಗಕ್ಕೆ ಸಹನಿರ್ದೇಶಕರು ಹಾಗೂ ಸಹಾಯಕ ನಿರ್ದೇಶಕರನ್ನು ನಿಯೋಜಿಸಿರುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 05 | ವಿಷಯ ಮತ್ತು ಟಿಪ್ಪಣಿ | **ಡಾ. ಭಜಹರಿ ದಾಸ್, ಸಹಾಯಕ ಪ್ರಾಧ್ಯಾಪಕರು, ವೇದಾಂತ ನಿಕಾಯ –ಇವರನ್ನು ಕರ್ತವ್ಯದಿಂದ ಬಿಡುಗಡೆ ಮಾಡಿರುವ ಬಗೆಗೆ.**<br>ಡಾ. ಭಜಹರಿ ದಾಸ್, ಸಹಾಯಕ ಪ್ರಾಧ್ಯಾಪಕರು, ವೇದಾಂತ ನಿಕಾಯ –ಇವರು ಹಿಮಾಚಲ ಪ್ರದೇಶ ಕೇಂದ್ರೀಯ ವಿಶ್ವವಿದ್ಯಾಲಯದ ಸಂಸ್ಕೃತ ವಿಭಾಗಕ್ಕೆ ಸಹಾಯಕ ಪ್ರಾಧ್ಯಾಪಕರಾಗಿ ನೇಮಕ ಹೊಂದಿದ್ದು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸೇವೆಯಿಂದ ಬಿಡುಗಡೆ ಮಾಡುವಂತೆ ಮನವಿಯನ್ನು ಕೋರಿರುತ್ತಾರೆ. ಇವರ ಮನವಿಯನ್ನು ಪರಿಗಣಿಸಿ, 2017ನೇ ಮೇ ತಿಂಗಳಾಂತ್ಯಕ್ಕೆ ಇವರನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಹುದ್ದೆಯ ಸೇವೆಯಿಂದ ಬಿಡುಗಡೆಗೊಳಿಸ ಬೇಕಾಗುತ್ತದೆ. ಇವರ ಖಾಯಂಪೂರ್ವ ಸೇವಾವಧಿಯು ಇನ್ನೂ ಪೂರ್ಣವಾಗದ ಹಿನ್ನೆಲೆಯಲ್ಲಿ, ಇವರನ್ನು ಲೀನ್‌ನ ಮೇರೆಗೆ ಕಳುಹಿಸಲು ಅವಕಾಶವಿರುವುದಿಲ್ಲ. ಇದರಿಂದಾಗಿ, ಇವರ ಬಿಡುಗಡೆಯಿಂದ ತೆರವಾಗಬಹುದಾದ ಸಹಾಯಕ ಪ್ರಾಧ್ಯಾಪಕ ಹುದ್ದೆಯು ಖಾಲಿ ಉಳಿಯಲಿದ್ದು, ಮುಂದಿನ ದಿನಗಳಲ್ಲಿ ಈ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಬಹುದಾಗಿದೆ. ಈ ಎಲ್ಲ ಅಂಶಗಳನ್ನು ಪ್ರಶಾಸನ ಸಮಿತಿಯ ಅವಗಾಹನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಎಲ್ಲ ವಿವರಗಳನ್ನು ಗಮನಿಸಿತು. ನಿಯಮಾನುಸಾರ ಸಹಾಯಕ ಪ್ರಾಧ್ಯಾಪಕ ಹುದ್ದೆಯ ಕರ್ತವ್ಯದಿಂದ ಬಿಡುಗಡೆ ಮಾಡುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು. ಹುದ್ದೆಯನ್ನು ತುಂಬಿಕೊಳ್ಳುವ ಪೂರ್ವದಲ್ಲಿ ಸರ್ಕಾರದ ಅನುಮೋದನೆ ಅಗತ್ಯವೆಂದು ಸಭೆಯು ಭಾವಿಸಿತು.** |

| | | |
|---|---|---|
| ವಿಷಯ 06 | ವಿಷಯ ಮತ್ತು ಟಿಪ್ಪಣಿ | 'ಕಾಲೇಜು ಅಭಿವೃದ್ಧಿ ಮಂಡಳಿ' ಸಂಚಾಲಕರನ್ನು ಬದಲಾವಣೆ ಮಾಡಿರುವ ಬಗೆಗೆ.<br>ದಿನಾಂಕ: 05.07.2016ರಂದು ನಡೆದ 'ಪ್ರಶಾಸನ ಸಮಿತಿ' 33ನೇ ಸಭೆಯ ನಿರ್ಣಯದಂತೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಕಾಲೇಜು ಅಭಿವೃದ್ಧಿ ಮಂಡಳಿ' ಸಂಯೋಜಕರನ್ನಾಗಿ ಡಾ. ವಿನಯ್ ಪಿ., ಸಹಾಯಕ ಪ್ರಾಧ್ಯಾಪಕರು, ವೇದಾಂತ ನಿಕಾಯ –ಇವರನ್ನು ನಿಯೋಜಿಸಿ ಆದೇಶಿಸಲಾಗಿತ್ತು. ಬೋಧನೆ ಮತ್ತು ಸಂಶೋಧನೆಯ ಕಾರ್ಯದೊತ್ತಡವಿರುವುದರಿಂದ, ಸಂಯೋಜಕ ಜವಾಬ್ದಾರಿಯಿಂದ ತಮ್ಮನ್ನು ಮುಕ್ತಗೊಳಿಸಬೇಕೆಂದು ಡಾ. ವಿನಯ್ ಪಿ. –ಇವರು ಮನವಿ ಸಲ್ಲಿಸಿದ್ದರು. ಇವರ ಮನವಿಯನ್ನು ಪುರಸ್ಕರಿಸಿ, 'ಕಾಲೇಜು ಅಭಿವೃದ್ಧಿ ಮಂಡಳಿ'ಯ ಸಂಯೋಜಕರನ್ನಾಗಿ ಡಾ. ಸಿ. ಪಾಲಯ್ಯ, ಸಹಪ್ರಾಧ್ಯಾಪಕರು, ಭಾಷಾನಿಕಾಯ –ಇವರನ್ನು ನಿಯೋಜಿಸಲಾಗಿದೆ. ಈ ವಿಷಯವನ್ನು ಪ್ರಶಾಸನ ಸಮಿತಿಯ ಅವಗಾಹನೆಗಾಗಿ ಮಂಡಿಸಿದೆ. |
| | ನಿರ್ಣಯ | **ಡಾ. ಸಿ. ಪಾಲಯ್ಯ, ಸಹಪ್ರಾಧ್ಯಾಪಕರು, ಭಾಷಾನಿಕಾಯ, ಕ.ಸಂ.ವಿ. –ಇವರನ್ನು 'ಕಾಲೇಜು ಅಭಿವೃದ್ಧಿ ಮಂಡಳಿ'ಯ ಸಂಯೋಜಕರನ್ನಾಗಿ ನಿಯೋಜಿಸಿರುವುದಕ್ಕೆ ಸಭೆಯು ಒಪ್ಪಿಗೆ ನೀಡಿತು. 'ಕಾಲೇಜು ಅಭಿವೃದ್ಧಿ ಮಂಡಳಿ' ಸ್ಥಾಪನೆಗೆ ಸಂಬಂಧಿಸಿದ ಪರಿನಿಯಮವನ್ನು ಆದಷ್ಟು ಬೇಗ ರಚಿಸಿ, ನಿಯಮಾನುಸಾರ ಸರ್ಕಾರದಿಂದ ಅನುಮೋದನೆ ಪಡೆಯಲು ಸಭೆಯು ಸೂಚಿಸಿತು.** |
| ವಿಷಯ 07 | ವಿಷಯ ಮತ್ತು ಟಿಪ್ಪಣಿ | **ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಬೆಂಗಳೂರು ಆವರಣದ ಕಟ್ಟಡದಲ್ಲಿ ಮೊದಲ ಅಂತಸ್ತಿನ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಚಾಮರಾಜಪೇಟೆ ಆವರಣದ ಈಗಿನ ಕಟ್ಟಡದ ವಿಸ್ತೀರ್ಣವು ಚಿಕ್ಕದಾಗಿದ್ದು, ವಿಶ್ವವಿದ್ಯಾಲಯದ ಎಲ್ಲಾ ಸಿಬ್ಬಂದಿಗಳಿಗೆ ಅಗತ್ಯ ಸ್ಥಳಾವಕಾಶವನ್ನು ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ, ವಿಶ್ವವಿದ್ಯಾಲಯದ ಈಗಿನ ಕಟ್ಟಡದ ಮೇಲ್ಭಾಗದಲ್ಲಿ (ಮೊದಲನೇ ಮಹಡಿ) ಹೊಸ ಕಟ್ಟಡವನ್ನು ನಿರ್ಮಿಸಲು ಅಗತ್ಯವಾದ ನೀಲಿನಕ್ಷೆ ಸಿದ್ಧಪಡಿಸಿಕೊಡುವಂತೆ 'ಮಾನ್ಯ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್., ಬೆಂಗಳೂರು ವಿಭಾಗ, ಬೆಂಗಳೂರು' –ಇವರನ್ನು ಕೋರಲಾಗಿತ್ತು. ಕೆ.ಆರ್.ಐ.ಡಿ.ಎಲ್. ಸಂಸ್ಥೆಯು ನೀಲಿನಕ್ಷೆಯನ್ನು ಸಿದ್ಧಪಡಿಸಿ, ಕಟ್ಟಡ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚದ ಪಟ್ಟಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದೆ. ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಅನುದಾನದ ಮೊತ್ತವನ್ನು ಬಳಸಿಕೊಂಡು, ಈ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದ ನಂತರ, ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಆರಂಭಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲು ಸಭೆಯು ಒಪ್ಪಿಗೆ ನೀಡಿತು. ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿ, ಹಂತ ಹಂತವಾಗಿ ಅನುದಾನದ ಮೊತ್ತವನ್ನು ಬಿಡುಗಡೆ ಮಾಡಲು ಸಭೆಯು ಸೂಚಿಸಿತು.** |
| ವಿಷಯ 08 | ವಿಷಯ ಮತ್ತು ಟಿಪ್ಪಣಿ | **ಮೈಸೂರಿನ ಮಹಾರಾಜ ಸಂಸ್ಕೃತ ಕಾಲೇಜು ಆವರಣದಲ್ಲಿ ವಿಶ್ವವಿದ್ಯಾಲಯದ 'ಸಂಶೋಧನ ಕೇಂದ್ರ' ನಿರ್ಮಿಸುವ ಬಗೆಗೆ.**<br>ಮೈಸೂರಿನ ಮಹಾರಾಜ ಸಂಸ್ಕೃತ ಕಾಲೇಜಿನಲ್ಲಿ ಲಭ್ಯವಿರುವ ಅನುದಾನದ ಮೊತ್ತವನ್ನು ಬಳಸಿಕೊಂಡು ಕಾಲೇಜು ಆವರಣದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ 'ಸಂಶೋಧನ ಕೇಂದ್ರ'ವನ್ನು ನಿರ್ಮಾಣ ಮಾಡಲು ಈ ಹಿಂದೆ ನಿರ್ಣಯಿಸಲಾಗಿತ್ತು. ಆದರೆ, ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗಿರಲಿಲ್ಲ. ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ, ದಿನಾಂಕ: 15.05.2017ರಂದು ಮೈಸೂರಿನ ಮಹಾರಾಜ ಸಂಸ್ಕೃತ ಕಾಲೇಜಿನಲ್ಲಿ ನಡೆದ 'ಕಟ್ಟಡ ಸಲಹಾ ಸಮಿತಿ' ಸಭೆಯು ಕಟ್ಟಡದ ನೀಲಿನಕ್ಷೆ ಹಾಗೂ ಅಂದಾಜು ವೆಚ್ಚವನ್ನು ಅಂತಿಮಗೊಳಿಸಿ 'ಸಂಶೋಧನ ಕೇಂದ್ರ'ದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಆದಷ್ಟೂ ಬೇಗ ಕೈಗೆತ್ತಿಕೊಳ್ಳಲು ಹಾಗೂ ಸಂಬಂಧಪಟ್ಟ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ಣಯಿಸಿತು. ಮುಂದಿನ ಕ್ರಮ ವಹಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಮೈಸೂರಿನ ಮಹಾರಾಜ ಸಂಸ್ಕೃತ ಕಾಲೇಜು ಆವರಣದಲ್ಲಿ ವಿಶ್ವವಿದ್ಯಾಲಯದ 'ಸಂಶೋಧನ ಕೇಂದ್ರ' ನಿರ್ಮಿಸುವುದಕ್ಕೆ ಸಂಬಂಧಿಸಿದಂತೆ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಕಾರ್ಯಪಾಲಕ ಅಭಿಯಂತರರು ಅಂದಾಜುಪಟ್ಟಿಯನ್ನು ಸಿದ್ಧಪಡಿಸಿದ್ದು, ಸಂಶೋಧನ ಕೇಂದ್ರದ ನೆಲಮಹಡಿ ನಿರ್ಮಾಣಕ್ಕೆ ರೂ. 63.00** |

| | | |
|---|---|---|
| | | ಲಕ್ಷಗಳು ಹಾಗೂ ನೆಲಮಹಡಿ ಮತ್ತು ಮೊದಲನೇ ಮಹಡಿ ಕಟ್ಟಡ (ಎರಡೂ ಮಹಡಿಗಳ) ನಿರ್ಮಾಣಕ್ಕೆ ರೂ. 110.00 ಲಕ್ಷಗಳ ಅಂದಾಜು ಮೊತ್ತವನ್ನು ಸೂಚಿಸಿದ್ದಾರೆ. ಈ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ರೂ. 110.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಸಂಶೋಧನ ಕೇಂದ್ರದ ನೆಲಮಹಡಿ ಮತ್ತು ಮೊದಲನೇ ಮಹಡಿ ನಿರ್ಮಾಣಕ್ಕೆ ಕ್ರಮವಹಿಸಲಾಗುತ್ತಿದೆ ಎಂದು ಕುಲಪತಿಗಳು ಸಭೆಗೆ ತಿಳಿಸಿದರು. ಸಭೆಯು ಎಲ್ಲ ವಿವರಗಳನ್ನು ಪಡೆದು, ಸಂತೋಷದಿಂದ ಅನುಮೋದನೆ ನೀಡಿತು ಹಾಗೂ ಈ ಬಗ್ಗೆ ಆದಷ್ಟು ಬೇಗ ಕ್ರಮಕೈಗೊಳ್ಳುವಂತೆ ಸೂಚಿಸಿತು. |
| ವಿಷಯ 09 | ವಿಷಯ ಮತ್ತು ಟಿಪ್ಪಣಿ | **ಅನುದಾನರಹಿತ ಸಂಸ್ಕೃತ ಪಾಠಶಾಲೆಗಳಿಗೆ ಮಾನ್ಯತೆ ನೀಡಿರುವ ಬಗೆಗೆ.**<br>ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನರಹಿತ ಸಂಸ್ಕೃತ ಪಾಠಶಾಲೆಗಳ ಆಡಳಿತ ಮಂಡಳಿಯವರು ಹೊಸದಾಗಿ ಮಾನ್ಯತೆ ಪಡೆಯಲು ಹಾಗೂ ಪಡೆದಿರುವ ಮಾನ್ಯತೆಯನ್ನು ನವೀಕರಿಸಲು ಪ್ರಸ್ತಾವನೆಗಳನ್ನು ಸಲ್ಲಿಸಿದ್ದವು. ಈ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಮಾನ್ಯತೆಯನ್ನು ನವೀಕರಿಸಲಾಗಿದೆ ಹಾಗೂ ಹೊಸದಾಗಿ ಮಾನ್ಯತೆಯನ್ನು ನೀಡಿದ್ದು, ಅನುಮೋದನೆಗಾಗಿ ದಿನಾಂಕ: 01.04.2017ರಂದು ನಡೆದ ಪ್ರಶಾಸನ ಸಮಿತಿ 37ನೇ ಸಭೆಯಲ್ಲಿ ಮಂಡಿಸಲಾಗಿತ್ತು. ಪ್ರಶಾಸನ ಸಮಿತಿಯು ಎಲ್ಲ ವಿವರಗಳನ್ನು ಪರಿಶೀಲಿಸಿ, ಪಾಠಶಾಲೆಗಳಿಗೆ ಭೇಟಿ ನೀಡಿದ ತ್ರಿಸದಸ್ಯ ಸಮಿತಿಯ ಅಭಿಪ್ರಾಯ ಮತ್ತು ಶಿಫಾರಸ್ಸುಗಳನ್ನು ಒಳಗೊಂಡ ಸಂಪೂರ್ಣ ವಿವರಗಳೊಂದಿಗೆ ಮುಂದಿನ ಸಭೆಯಲ್ಲಿ ಮಂಡಿಸುವಂತೆ ಸೂಚಿಸಿತ್ತು. ಅದರಂತೆ, ಪೂರ್ಣವಿವರಗಳನ್ನು ಸಭೆಗೆ ಮಂಡಿಸಿದೆ. |
| | ನಿರ್ಣಯ | **ಸಭೆಯು ವಿವರಗಳನ್ನು ಸಂಪೂರ್ಣವಾಗಿ ಪರಿಶೀಲಿಸಿ ಒಪ್ಪಿಗೆ ಸೂಚಿಸಿತು. ಕೆಲವು ಸಂಸ್ಥೆಗಳ ನೋಂದಣಿ ದಿನಾಂಕದ ವಿವರಗಳಲ್ಲಿ ವ್ಯತ್ಯಾಸ ಕಂಡುಬಂದಿರುವುದನ್ನು ಗಮನಿಸಿ, Bombay Trust Act ನಿಂದ Society Actಗೆ ವರ್ಗಾಯಿಸಿಕೊಂಡಿದ್ದರೆ (Migrate ಮಾಡಿಕೊಂಡಿದ್ದರೆ), ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು 6 ತಿಂಗಳ ಒಳಗಾಗಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸಲು ಆಡಳಿತ ಮಂಡಳಿಗಳಿಗೆ ಸೂಚನೆ ಕೊಡುವಂತೆ ಸಭೆ ಭಾವಿಸಿತು. ಮಾಹಿತಿ ಸಲ್ಲಿಸದ ಪಕ್ಷದಲ್ಲಿ ಕಾನೂನು ಪ್ರಕಾರ ಕ್ರಮಕೈಗೊಳ್ಳಲು ನಿರ್ದೇಶನ ನೀಡಿತು.** |
| ವಿಷಯ 10 | ವಿಷಯ ಮತ್ತು ಟಿಪ್ಪಣಿ | **ಜ್ಯೋತಿಷ ಸರ್ಟಿಫಿಕೇಟ್, ಡಿಪ್ಲೋಮಾ ಹಾಗೂ ಅಡ್ವಾನ್ಸ್ಡ ಡಿಪ್ಲೋಮಾ ಕೋರ್ಸ್‌ಗಳ 'ಸಲಹಾ ಸಮಿತಿ' ರಚಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಜ್ಯೋತಿಷ ಸರ್ಟಿಫಿಕೇಟ್, ಡಿಪ್ಲೋಮಾ ಹಾಗೂ ಅಡ್ವಾನ್ಸ್ಡ ಡಿಪ್ಲೋಮಾ ಕೋರ್ಸುಗಳನ್ನು 2014–15ನೇ ಸಾಲಿನಿಂದ ಪ್ರಾರಂಭಿಸಿದೆ. ವಿಶ್ವವಿದ್ಯಾಲಯದಿಂದ ಮಾನ್ಯತೆಯನ್ನು ಪಡೆದ ಜ್ಯೋತಿಷ ಸಂಸ್ಥೆಗಳು ಈ ಕೋರ್ಸ್‌ಗಳನ್ನು ನಡೆಸುತ್ತಿವೆ. ವಿಶ್ವವಿದ್ಯಾಲಯವು ಈ ಕೋರ್ಸ್‌ಗಳ ಪರೀಕ್ಷೆಗಳನ್ನು ನಡೆಸಿ, ಪ್ರಮಾಣಪತ್ರಗಳನ್ನು ನೀಡುತ್ತಿದೆ. ಇತ್ತೀಚಿನ ವರ್ಷಗಳಲ್ಲಿ ಸರ್ಟಿಫಿಕೇಟ್, ಡಿಪ್ಲೋಮಾ ಹಾಗೂ ಅಡ್ವಾನ್ಸ್ಡ ಡಿಪ್ಲೋಮಾ ಕೋರ್ಸುಗಳ ಅಧ್ಯಯನ ಮಾಡುವ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿದೆ. ಈ ಕೋರ್ಸ್‌ಗಳನ್ನು ಮತ್ತಷ್ಟು ವ್ಯವಸ್ಥಿತವಾಗಿ ನಡೆಸಿಕೊಂಡು ಹೋಗಲು 'ಸಲಹಾ ಸಮಿತಿ'ಯೊಂದರ ಅಗತ್ಯವಿದೆ. ವಿಶ್ವವಿದ್ಯಾಲಯ ಹಾಗೂ ಜ್ಯೋತಿಷ ಸಂಸ್ಥೆಗಳ ಮುಖ್ಯಸ್ಥರನ್ನು ಒಳಗೊಂಡ 'ಸಲಹಾ ಸಮಿತಿ'ಯನ್ನು ರಚಿಸಬಹುದಾಗಿದೆ. ಪ್ರಶಾಸನ ಸಮಿತಿ ಅನುಮೋದನೆಗಾಗಿ ಈ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಜ್ಯೋತಿಷ ಸರ್ಟಿಫಿಕೇಟ್, ಡಿಪ್ಲೋಮಾ ಹಾಗೂ ಅಡ್ವಾನ್ಸ್ಡ ಡಿಪ್ಲೋಮಾ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಐವರು ಸದಸ್ಯರನ್ನು ಒಳಗೊಂಡಂತೆ 'ಸಲಹಾ ಸಮಿತಿ'ಯನ್ನು ರಚಿಸಲು ಹಾಗೂ ಕುಲಪತಿಗಳು ಸಮಿತಿ ಸದಸ್ಯರನ್ನು ನಿರ್ಧರಿಸಬಹುದೆಂದು ಸಭೆಯು ಒಪ್ಪಿಗೆ ನೀಡಿತು.** |
| ವಿಷಯ 11 | ವಿಷಯ ಮತ್ತು ಟಿಪ್ಪಣಿ | **'ಆಂತರಿಕ ಗುಣಮಟ್ಟದ ಭರವಸೆ ಕೋಶ' (Internal Quality Assurance Cell) ಸ್ಥಾಪಿಸುವ ಬಗೆಗೆ.**<br>ರಾಜ್ಯದ ಇತರೆ ವಿಶ್ವವಿದ್ಯಾಲಯಗಳಲ್ಲಿ ಇರುವಂತೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲೂ 'ಆಂತರಿಕ ಗುಣಮಟ್ಟದ ಭರವಸೆ ಕೋಶ'(Internal Quality Assurance Cell)ವನ್ನು ಸ್ಥಾಪಿಸಬೇಕಾಗಿದ್ದು, ಮುಂದಿನ ಕ್ರಮವಹಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಕೆಳಕಂಡ ಸದಸ್ಯರನ್ನೊಳಗೊಂಡಂತೆ 'ಆಂತರಿಕ ಗುಣಮಟ್ಟದ ಭರವಸೆ ಕೋಶ'ವನ್ನು ರಚಿಸಲು ಸಭೆ ಒಪ್ಪಿಗೆ ಸೂಚಿಸಿತು.**<br>1. **ಪ್ರೊ. ಪಿ. ವೆಂಕಟರಾಮಯ್ಯ, ನಿವೃತ್ತ ಕುಲಪತಿಗಳು, ಮೈಸೂರು**<br>2. **ಡಾ. ಚಂಬಿ ಪುರಾಣಿಕ್, ಮುಖ್ಯ ಶೈಕ್ಷಣಿಕ ಸಲಹೆಗಾರರು, ಜೆಮ್ಸ್ ಬಿ ಸ್ಕೂಲ್**<br>3. **ಡಾ. ವೇಣೀಮಾಧವಶಾಸ್ತ್ರಿ ಜೋಶಿ, ಧಾರವಾಡ**<br>4. **ಪ್ರೊ. ಶ್ರೀನಿವಾಸ ವರಖೇಡಿ, ಡೀನ್, ಶಾಸ್ತ್ರನಿಕಾಯ, ಕ.ಸಂ.ವಿ.** |

| | | |
|---|---|---|
| ವಿಷಯ 12 | ವಿಷಯ ಮತ್ತು ಟಿಪ್ಪಣಿ | ಸಂಸ್ಕೃತ ಸಂಶೋಧನ ಸಂಸತ್‌ನ 'ಆಡಳಿತ ಮಂಡಳಿ' ಹಾಗೂ 'ಪ್ರಸಾರಾಂಗ ಸಲಹಾ ಸಮಿತಿ' ಸಭೆಗಳ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.<br>ಸಂಸ್ಕೃತ ಸಂಶೋಧನ ಸಂಸತ್‌ನ 'ಆಡಳಿತ ಮಂಡಳಿ' ಮೂರನೇ ಸಭೆ ಹಾಗೂ 'ಪ್ರಸಾರಾಂಗ ಸಲಹಾ ಸಮಿತಿ' ಮೂರನೇ ಸಭೆಯು ದಿನಾಂಕ: 03.04.2017ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆದವು. ಈ ಸಭೆಗಳ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಸಂಸ್ಕೃತ ಸಂಶೋಧನ ಸಂಸತ್‌ನ 'ಆಡಳಿತ ಮಂಡಳಿ' 3ನೇ ಸಭೆ ಹಾಗೂ 'ಪ್ರಸಾರಾಂಗ ಸಲಹಾ ಸಮಿತಿ' 3ನೇ ಸಭೆಯ ನಡಾವಳಿಗಳನ್ನು ಪರಿಶೀಲಿಸಿ ಅನುಮೋದನೆಯನ್ನು ನೀಡಿತು.** |
| ವಿಷಯ 13 | ವಿಷಯ ಮತ್ತು ಟಿಪ್ಪಣಿ | **ಐದನೇ ದೀಕ್ಷಾಂತ ಘಟಿಕೋತ್ಸವಕ್ಕೆ ತಗುಲಿದ ವೆಚ್ಚವನ್ನು ಅನುಮೋದಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಐದನೆಯ ದೀಕ್ಷಾಂತ ಘಟಿಕೋತ್ಸವವನ್ನು ದಿನಾಂಕ: 15.02.2017 ರಂದು ಕುವೆಂಪು ಸಭಾಂಗಣದಲ್ಲಿ ಯಶಸ್ವಿಯಾಗಿ ನಡೆಸಲಾಯಿತು. ಈ ದೀಕ್ಷಾಂತ ಘಟಿಕೋತ್ಸವವನ್ನು ನಡೆಸಲು 5.00 ಲಕ್ಷ ರೂಪಾಯಿಗಳ ಅಂದಾಜು ವೆಚ್ಚವನ್ನು ಸಿದ್ಧಪಡಿಸಿ, ದಿನಾಂಕ: 05.07.2016ರಂದು ನಡೆದ ಪ್ರಶಾಸನ ಸಮಿತಿ 33ನೇ ಸಭೆಯಲ್ಲಿ ಅನುಮೋದನೆ ಪಡೆಯಲಾಗಿತ್ತು. ಈ ಸಮಾರಂಭಕ್ಕೆ ಒಟ್ಟಾರೆ 2,39,401/– ರೂಪಾಯಿಗಳು ಖರ್ಚಾಗಿದ್ದು, ಈ ಮೊತ್ತಕ್ಕೆ ಪ್ರಶಾಸನ ಸಮಿತಿಯ ಅನುಮೋದನೆಯನ್ನು ಕೋರಿದೆ. |
| | ನಿರ್ಣಯ | **ಸಭೆಯು ವಿವರಗಳನ್ನು ಪರಿಶೀಲಿಸಿ, ಐದನೇ ದೀಕ್ಷಾಂತ ಘಟಿಕೋತ್ಸವಕ್ಕೆ ತಗುಲಿದ ವೆಚ್ಚಕ್ಕೆ ಅನುಮೋದನೆ ನೀಡಿತು.** |
| ವಿಷಯ 14 | ವಿಷಯ ಮತ್ತು ಟಿಪ್ಪಣಿ | **ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಪಠ್ಯಪುಸ್ತಕಗಳನ್ನು ರಿಯಾಯಿತಿ ದರದಲ್ಲಿ ಮಾರಾಟ ಮಾಡುವ ಬಗೆಗೆ.**<br>ಪ್ರಸಾರಾಂಗದ ವತಿಯಿಂದ ಮುದ್ರಿಸಿದ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಪ್ರಥಮಾ, ಕಾವ್ಯ ಹಾಗೂ ಸಾಹಿತ್ಯ ತರಗತಿಗಳ ಪಠ್ಯಪುಸ್ತಕಗಳನ್ನು ದಿನಾಂಕ: 22.12.2015ರಂದು ನಡೆದ ಪ್ರಶಾಸನ ಸಮಿತಿ 31ನೇ ಸಭೆಯ ನಿರ್ಣಯದಂತೆ, ಶೇ. 15 ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗಿತ್ತು. ಅದರಂತೆಯೇ, ಈ ಸಾಲಿನಲ್ಲಿಯೂ ಪಠ್ಯಪುಸ್ತಕಗಳನ್ನು ಶೇ. 10ರಿಂದ ಶೇ. 15ರವರೆಗೆ ರಿಯಾಯಿತಿ ನೀಡಿ ಮಾರಾಟ ಮಾಡಲು ಪ್ರಶಾಸನ ಸಮಿತಿಯ ಅನುಮೋದನೆಯನ್ನು ಕೋರಿದೆ. |
| | ನಿರ್ಣಯ | **ಪಠ್ಯಪುಸ್ತಕಗಳನ್ನು ಶೇ. 10ರಿಂದ ಶೇ. 15 ರಿಯಾಯಿತಿ ನೀಡಿ ಮಾರಾಟ ಮಾಡಲು ಸಭೆಯು ಒಪ್ಪಿಗೆ ಸೂಚಿಸಿತು.** |
| **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳಿಗೆ ಸ್ಥಳೀಯ ಪರಿವೀಕ್ಷಣಾ ಸಮಿತಿಯನ್ನು ಕಳುಹಿಸುವ ಬಗೆಗೆ.**<br>ಸರ್ಕಾರದ ಆದೇಶ ಸಂಖ್ಯೆ: ಇಡಿ 600 ಯುಆರ್‌ಸಿ 2015, ದಿನಾಂಕ: 06.01.2017ರ ಅನ್ವಯ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಅಧೀನದಲ್ಲಿರುವ ಸಂಯೋಜಿತ ಕಾಲೇಜುಗಳ ತಪಾಸಣೆಗಾಗಿ ನಿಯಮಾನುಸಾರ ಸ್ಥಳೀಯ ಪರಿವೀಕ್ಷಣಾ ಸಮಿತಿಗಳನ್ನು ಕಳುಹಿಸಬೇಕಾಗಿದೆ. ಈ ಸಂಬಂಧ ಸ್ಥಳೀಯ ಪರಿವೀಕ್ಷಣಾ ಸಮಿತಿಯನ್ನು ರಚಿಸಲು ಶಿಕ್ಷಣತಜ್ಞರ ಮತ್ತು ವಿಷಯತಜ್ಞರ ಹೆಸರು ಸೂಚಿಸಲು ಪ್ರಶಾಸನ ಸಮಿತಿ ಸಭೆಗೆ ಮಂಡಿಸಿದೆ. |
| | ನಿರ್ಣಯ | **ಸರ್ಕಾರದ ನಿಯಮಾನುಸಾರ ಕೆಳಕಂಡ ಸದಸ್ಯರನ್ನೊಳಗೊಂಡಂತೆ 'ಸ್ಥಳೀಯ ಪರಿವೀಕ್ಷಣಾ ಸಮಿತಿ'ಯನ್ನು ರಚಿಸಲು ಸಭೆಯು ಒಪ್ಪಿತು.**<br>**1. ಪ್ರೊ. ಕೆ.ಈ. ರಾಧಾಕೃಷ್ಣ, ಶಿಕ್ಷಣತಜ್ಞರು, ಬೆಂಗಳೂರು**<br>**2. ಪ್ರೊ. ಕೆ.ಎಸ್. ಕಣ್ಣನ್, ವಿಷಯತಜ್ಞರು, ಬೆಂಗಳೂರು**<br>**3. ಡಾ. ಎಂ. ಶಿವಕುಮಾರಸ್ವಾಮಿ, ವಿಷಯತಜ್ಞರು, ಬೆಂಗಳೂರು**<br>**4. ಡಾ. ಬಿ.ಎಸ್. ಮಹದೇವಯ್ಯ, ವಿಷಯತಜ್ಞರು, ಬೆಂಗಳೂರು**<br>**5. ಡಾ. ಬಿ.ಎಲ್. ನಡೋಣಿ, ಪ್ರಾಧ್ಯಾಪಕರು, ಧಾರವಾಡ** |
| ವಿಷಯ 02 | ವಿಷಯ ಮತ್ತು ಟಿಪ್ಪಣಿ | **ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಯನ್ನು ನಿರ್ಧರಿಸುವ ಬಗೆಗೆ.**<br>ಕರ್ನಾಟಕ ಸರ್ಕಾರದ 'Grant-In-Aid code for Samskruta Colleges, Samskruta Pathashalas and Veda Pathashalas in Karnataka State'ದ 34(1)ರ ಪ್ರಕಾರ, ಬಿ.ಎ. ಶಾಸ್ತ್ರಿ(ವಿದ್ವನ್ಮಧ್ಯಮಾ) ತರಗತಿಗೆ (ಪ್ರತಿಯೊಂದು ಶಾಸ್ತ್ರ/ವೇದ ಭಾಗಕ್ಕೂ) **ಕನಿಷ್ಠ 6 ವಿದ್ಯಾರ್ಥಿಗಳು** ಮತ್ತು |

| | | |
|---|---|---|
| | | ಎಂ.ಎ. ಆಚಾರ್ಯ(ವಿದ್ವದುತ್ತಮಾ) ತರಗತಿಗೆ (ಪ್ರತಿಯೊಂದು ಶಾಸ್ತ್ರ/ವೇದ ಭಾಗಕ್ಕೂ) ಕನಿಷ್ಠ 4 ವಿದ್ಯಾರ್ಥಿಗಳು ಪ್ರವೇಶ ಪಡೆಯುವುದು ಅಗತ್ಯವಾಗಿರುತ್ತದೆ. ಆದರೆ, ಕೆಲವು ಕಾಲೇಜುಗಳಲ್ಲಿ ಈ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿಲ್ಲ. ಇಂತಹ ಕಾಲೇಜುಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲು ಪ್ರಶಾಸನ ಸಮಿತಿ ಸಭೆಗೆ ಮಂಡಿಸಿದೆ. |
| | ನಿರ್ಣಯ | **ಗ್ರಾಮೀಣ ಪ್ರದೇಶಕ್ಕೆ ಅನ್ವಯಿಸಿದಂತೆ ಸಂಸ್ಕೃತ ಅಧ್ಯಯನ ಮಾಡುವವರು ವಿರಳವಾಗಿರುವುದರಿಂದ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಯ ವಿಷಯದಲ್ಲಿ ಸಡಿಲಗೊಳಿಸಬಹುದೆಂದು ಸಭೆಯು ನಿರ್ಣಯಿಸಿತು.** |
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **ಬೋಧಕ-ಬೋಧಕೇತರ ಸಿಬ್ಬಂದಿಗಳಿಗೆ NPS (National Pension System) ಕಲ್ಪಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ನೇಮಕಾತಿ ಮಾಡಿಕೊಂಡಿರುವ ಒಟ್ಟು 53 ಯುಜಿಸಿ/ ರಾಜ್ಯ ವೇತನಶ್ರೇಣಿಯ ಬೋಧಕ-ಬೋಧಕೇತರ ಸಿಬ್ಬಂದಿಗಳಲ್ಲಿ ಪ್ರಸ್ತುತ 47 ಸಿಬ್ಬಂದಿಗಳು ರಾಷ್ಟ್ರೀಯ ಪಿಂಚಣಿ ಯೋಜನೆ(NPS)ಗೆ ಒಳಪಡಲಿದ್ದಾರೆ. ಇವರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯ ಸೌಲಭ್ಯವನ್ನು ಕಲ್ಪಿಸಲು ಕ್ರಮವಹಿಸಲಾಗಿದ್ದು, ಈ ಸಿಬ್ಬಂದಿಗಳ PRAN (Permanent Retirement Account Number) ಚಾಲ್ತಿಗೊಂಡಿವೆ. ಈ ಹಿನ್ನೆಲೆಯಲ್ಲಿ, ಸಿಬ್ಬಂದಿಗಳ ವೇತನದಲ್ಲಿ ಕಟಾಯಿಸಿರುವ ಎನ್.ಪಿ.ಎಸ್. ಯೋಜನೆಯ ಮೊತ್ತ ಮತ್ತು ವಿಶ್ವವಿದ್ಯಾಲಯವು ಪಾವತಿಸಬೇಕಾದ ಮೊತ್ತವನ್ನು ಆಯಾ ಸಿಬ್ಬಂದಿಗಳ ಖಾತೆಗಳಿಗೆ ವರ್ಗಾಯಿಸಬೇಕಾಗಿದೆ. ಮುಂದಿನ ಕ್ರಮಕೈಗೊಳ್ಳಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 04 | ವಿಷಯ ಮತ್ತು ಟಿಪ್ಪಣಿ | **2017-18ನೇ ಸಾಲಿನಲ್ಲಿ 'ಸಂಸ್ಕೃತ ನಾಟಕೋತ್ಸವ'ವನ್ನು ನಡೆಸುವ ಬಗೆಗೆ.**<br>ಸಂಸ್ಕೃತ ಮಾಸಾಚರಣೆಯ ಹಿನ್ನೆಲೆಯಲ್ಲಿ, 2017ನೇ ಆಗಸ್ಟ್ ತಿಂಗಳಿನಲ್ಲಿ 'ಸಂಸ್ಕೃತ ನಾಟಕೋತ್ಸವ'ವನ್ನು ನಡೆಸಲು ಉದ್ದೇಶಿಸಲಾಗಿದೆ. ಈ ನಾಟಕೋತ್ಸವವನ್ನು ನಡೆಸಲು ರೂ. 4.00 ಲಕ್ಷ ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಕರ್ನಾಟಕದಾದ್ಯಂತದ ಎಲ್ಲಾ ಸಂಸ್ಕೃತ ಕಾಲೇಜುಗಳ ವಿದ್ಯಾರ್ಥಿಗಳು ಈ ನಾಟಕೋತ್ಸವದಲ್ಲಿ ಭಾಗವಹಿಸಲು ಅವಕಾಶವನ್ನು ಕಲ್ಪಿಸಲಾಗುತ್ತಿದೆ. ರೂ. 4.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಾಟಕೋತ್ಸವವನ್ನು ನಡೆಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ರೂ. 4.00 ಲಕ್ಷಗಳ ಅಂದಾಜುವೆಚ್ಚದಲ್ಲಿ ನಾಟಕೋತ್ಸವವನ್ನು ನಡೆಸಲು ಸಭೆಯು ಒಪ್ಪಿಗೆ ನೀಡಿ ಶಿವಮೊಗ್ಗ ಅಥವಾ ಧಾರವಾಡ ಅಥವಾ ಇನ್ನಿತರ ಸೂಕ್ತವಾದ ಸ್ಥಳದಲ್ಲಿ 'ಸಂಸ್ಕೃತ ನಾಟಕೋತ್ಸವ'ವನ್ನು ನಡೆಸಲು ಸೂಚಿಸಿತು.** |
| ವಿಷಯ 05 | ವಿಷಯ ಮತ್ತು ಟಿಪ್ಪಣಿ | **ಅನುದಾನಿತ ಸಂಸ್ಕೃತ ಪಾಠಶಾಲೆಗಳ ಪ.ಜಾತಿ, ಪ.ಪಂಗಡ ಹಾಗೂ ಪ್ರವರ್ಗ-1ರ ಶಿಕ್ಷಕರಿಗೆ 'ಸಂಸ್ಕೃತ ಪುನಶ್ಚೇತನ ಕಾರ್ಯಾಗಾರ'ವನ್ನು ಹಮ್ಮಿಕೊಳ್ಳುವ ಬಗೆಗೆ.**<br>ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನಿತ ಸಂಸ್ಕತ ಪಾಠಶಾಲೆಗಳಲ್ಲಿ ಪ.ಜಾತಿ, ಪ.ಪಂಗಡ ಹಾಗೂ ಪ್ರವರ್ಗ-1ಕ್ಕೆ ಸೇರಿದ ಒಟ್ಟು 92 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಶಿಕ್ಷಕರುಗಳ ಬೋಧನಾ ಸಾಮರ್ಥ್ಯವನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ಹತ್ತು ದಿನಗಳ ಕಾಲ 'ಸಂಸ್ಕೃತ ಪುನಶ್ಚೇತನ ಕಾರ್ಯಾಗಾರ'ವನ್ನು ಹಮ್ಮಿಕೊಳ್ಳಲಾಗುತ್ತಿದೆ. ಈ ಕಾರ್ಯಾಗಾರಕ್ಕೆ ರೂ. 3.00 ಲಕ್ಷಗಳ ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಶ್ರೀ ಕಾಲಭೈರವೇಶ್ವರ ಸಂಸ್ಕೃತ ವೇದ ಆಗಮ ಕಾಲೇಜಿನ ಸಹಕಾರದೊಡನೆ, ಶ್ರೀಕ್ಷೇತ್ರ ಆದಿಚುಂಚನಗಿರಿಯಲ್ಲಿ 2017ನೇ ಜೂನ್ ತಿಂಗಳ ಕೊನೆಯಲ್ಲಿ ಈ ಕಾರ್ಯಾಗಾರವನ್ನು ನಡೆಸಲಾಗುತ್ತಿದೆ. ಪ್ರಶಾಸನ ಸಮಿತಿ ಅನುಮೋದನೆಗಾಗಿ ಈ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಅನುದಾನಿತ ಸಂಸ್ಕೃತ ಪಾಠಶಾಲೆಗಳ ಪ.ಜಾತಿ, ಪ.ಪಂಗಡ ಹಾಗೂ ಪ್ರವರ್ಗ-1ರ ಶಿಕ್ಷಕರಿಗೆ 'ಸಂಸ್ಕೃತ ಪುನಶ್ಚೇತನ ಕಾರ್ಯಾಗಾರ'ವನ್ನು ಹಮ್ಮಿಕೊಳ್ಳುದಕ್ಕೆ ಸಭೆಯು ಒಪ್ಪಿಗೆ ಸೂಚಿಸಿತು. ಈ ಶಿಬಿರವು ಎಲ್ಲ ಪಾಠಶಾಲಾ ಅಧ್ಯಾಪಕರಿಗೆ ಅನಿವಾರ್ಯವಾಗಿದ್ದು, ಅವರ ಕೌಶಲವನ್ನು ಅಭಿವೃದ್ಧಿಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಸಭೆಯು ಅಭಿಪ್ರಾಯಪಟ್ಟಿತು. ಕಾರ್ಯಾಗಾರದಲ್ಲಿ ಪಾಲ್ಗೊಂಡ ಶಿಕ್ಷಕರು ಕಡ್ಡಾಯವಾಗಿ ಹಾಜರಾತಿ ಪ್ರಮಾಣಪತ್ರವನ್ನು ವೇತನದ ಬಿಲ್ಲಿನೊಂದಿಗೆ ಸಲ್ಲಿಸುವಂತೆ ಹಾಗೂ ಕಾರ್ಯಾಗಾರದ ಕೊನೆಯ ದಿನ ಅಧ್ಯಾಪಕರಿಗೆ ಪರೀಕ್ಷೆಯನ್ನು ನಡೆಸಲು ಸಭೆಯು ಸೂಚಿಸಿತು.** |

Shilpa

ಶ್ರೀಮತಿ ಎಂ. ಶಿಲ್ಪ, ಕೆ.ಎ.ಎಸ್.
ಸದಸ್ಯ ಕಾರ್ಯದರ್ಶಿ

ಪ್ರೊ. ಪದ್ಮಾಶೇಖರ್
ಅಧ್ಯಕ್ಷರು